ಓ ಎಸ್ ನಂ.270/2017

ಪಿ ಡಬ್ಲ್ಯೂ: 1

ದಿ. 30-11-2018 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಎಲ್ ಬಿ ಎಂ ವಕೀಲರಿಂದಃ

ನಾನು ನನ್ನ ವಿಚಾರಣೆಯ ಬದಲಾಗಿ ಪ್ರಮಾಣಪತ್ರ ವನ್ನು ಸಲ್ಲಿಸಿರುತ್ತೇನೆ. ಪ್ರಮಾಣಪತ್ರದಲ್ಲಿರುವ ಅಂಶವನ್ನು ನಾನೇ ಹೇಳಿ ಬರೆಸಿ ಸಹಿ ಹಾಕಿರುತ್ತೇನೆ. ಅದರಲ್ಲಿನ ಅಂಶಗಳು ಸತ್ಯವಾಗಿರುತ್ತವೆ. ನ್ಯಾಯಾಲಯದ ಮುಂದೆ ಸಲ್ಲಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ.

3 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿ-1 ರಿಂದ ನಿಪಿ-3 ಎಂದು ಗುರುತಿಸಲಾಯಿತು. 2 ಹೌಸ್ ಲಿಸ್ಟ್ ರಿಜಿಸ್ಟರ್ ಎಕ್ಸ್ಟ್ರಾಕ್ಟ್ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-4 ಮತ್ತು ನಿಪಿ-5 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪಂಚಾಯತಿ ಪಾಲುಪಟ್ಟಿ ದಾಖಲೆಯನ್ನು ತನ್ನ ಪರವಾಗಿ ಸಾಕ್ಷ್ಯದಲ್ಲಿ ಗುರುತಿಸುವಿಕೆಗಾಗಿ ಕೇಳಿಕೊಂಡಿದ್ದು ಪ್ರತಿವಾದಿ ಪರ ವಕೀಲರು ಸದರಿ ದಾಖಲೆಯನ್ನು ಸಾಕ್ಷ್ಯದಲ್ಲಿ ತೆಗೆದುಕೊಳ್ಳಲು ಬರುವುದಿಲ್ಲ ಎಂದು ತಕರಾರು ಮಾಡಿರುತ್ತಾರೆ. ಆದ್ದರಿಂದ ಸದರಿ ದಾಖಲೆಯನ್ನು ಸಾಕ್ಷ್ಯದಲ್ಲಿ ತೆಗೆದುಕೊಳ್ಳಲು ಬರುತ್ತದೆಯೋ ಇಲ್ಲವೋ ಎಂದು ಉಭಯಪಕ್ಷಗಾರರನ್ನು ಆಲಿಸುವ ಅಗತ್ಯ ಇರುತ್ತದೆ.

ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು.

(ತೆ.ನ್ಯಾಯಾಲಯದಲ್ಲಿ ನನ್ನ ಉತ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇದೆ

ಸಿ/ಸಿ ಪ್ರಧಾನ ಸಿವಿಲ್ ಮತ್ತು ಜೆ ಎಂ ಎಫ್ ಸಿ

ಹೊಸದುರ್ಗ .